1015 (407) ಶ್ರೀ ಕ್ಯಾತಸಂದ್ರ ಎನ್ ರಾಜಣ್ಣ (ಬೆಳ್ಳಾವಿ) ಮಾನ್ಯ ಜಲ ಸಂಪನ್ಮೂಲ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ,

ಅ) ತುಮಕೂರು ಜಿಲ್ಲೆಯಲ್ಲಿ ಹೇಮಾವತಿ ನಾಲೆಯಿಂದ ಕೆರೆಗಳಿಗೆ ನೀರನ್ನು ತುಂಬುತ್ತಿದ್ದು ಕೆರೆಕೋಡಿಗಳನ್ನು ದುರಸ್ಥಿ ಪಡಿಸದಿರುವುದರಿಂದ ನೀರು ರೈತರ ಜಮೀನಿನ ಮೇಲೆ ಹರಿದು ಜಮೀನುಗಳು ಹಾಳಾಗಿ ಹೋಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ,

ಆ) ಹೌದಾದಲ್ಲಿ, ಈ ಜಮೀನುಗಳಿಗೆ ನೀರು ಹರಿಯಬಿಡಲು ಕೋಡಿಗಳಿಗೆ ದುರಸ್ಥಿ ಮಾಡಲು ಕೈಗೊಂಡಿರುವ ಕ್ರಮವೇ,

ಇ) ವಿತರಣೆ ನಾಲೆಗಳಿಂದ ನೀರನ್ನು ಹರಿಸಿದ ಮೇಲೆ ರೈತರ ಜಮೀನುಗಳಿಗೆ ಫೀಡರ್‌ಚಾನಲ್ ನಿರ್ಮಿಸಲು ಸರ್ಕಾರ ಕ್ರಮ ಕೈಗೊಂಡಿದೆಯೇ?

ಶ್ರೀ ಕೆ ಎಸ್ ಈಶ್ವರಪ್ಪ (ಜಲ ಸಂಪನ್ಮೂಲ ಸಚಿವರು)

ಅ) ಇಲ್ಲ

ಆ) ಮೇಲಿನ ಉತ್ತರದಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ

ಇ) ಜಮೀನುಗಳಿಗೆ ನೀರನ್ನು ಹರಿಸಲು ಹೊಲಗಾಲುವೆಗಳನ್ನು ನಿರ್ಮಿಸಲು ಕ್ರಮಕೈಗೊಳ್ಳಲಾಗಿದೆ

1016 (408) ಶ್ರೀ ಕ್ಯಾತಸಂದ್ರ ಎನ್ ರಾಜಣ್ಣ (ಬೆಳ್ಳಾವಿ) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ,

ಅ) ರಾಜ್ಯದಲ್ಲಿ ಖಾಲಿ ಇರುವ ಗ್ರಾಮ ಪಂಚಾಯತಿ ಕಾರ್ಯದರ್ಶಿಗಳ ಹುದ್ದೆಗಳ ಸಂಖ್ಯೆ ಎಷ್ಟು, (ಜಿಲ್ಲಾವಾರು ವಿವರ ನೀಡುವುದು),

ಆ) ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು,

ಇ) ಎಷ್ಟು ವರ್ಷಗಳಿಂದ ಈ ಹುದ್ದೆಗಳು ಖಾಲಿ ಇವೆ?